# All India Radio: Bangalore
# National Bulletin In Kannada
# 16.01.2025 19.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

*****************

**ಮುಖ್ಯಾಂಶಗಳು**

1. **ಸ್ಪೇಡೆಕ್ಸ್ ಮಿಷನ್ ಅಡಿಯಲ್ಲಿ ಇಸ್ರೋದಿಂದ ಎರಡು ಉಪಗ್ರಹಗಳ ಜೋಡಣಾ ಕಾರ್ಯ ಯಶಸ್ವಿ**
2. **ರಾಷ್ಟ್ರಪತಿ ದ್ರೌಪದಿ ಮುರ್ಮು ಅವರೊಂದಿಗೆ ಸಿಂಗಾಪುರ ಅಧ್ಯಕ್ಷರ ದ್ವಿಪಕ್ಷೀಯ ಮಾತುಕತೆ**
3. **76ನೇ ಗಣರಾಜ್ಯೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಭಾಗಿ**
4. **ಕೇಂದ್ರ ಸರ್ಕಾರಿ ನೌಕರರು, ಪಿಂಚಣಿದಾರರಿಗೆ 8ನೇ ವೇತನ ಆಯೋಗ ಸ್ಥಾಪನೆ: ಕೇಂದ್ರ ಸರ್ಕಾರ ಘೋಷಣೆ**
5. **ಆಸ್ಟ್ರೇಲಿಯನ್ ಮುಕ್ತ ಟೆನಿಸ್: ಎರಡನೇ ಸುತ್ತಿಗೆ ಶ್ರೀರಾಮ್ ಬಾಲಾಜಿ– ಮಿಗುಯೆಲ್ ಏಂಜೆಲ್ ಜೋಡಿ ಮುನ್ನಡೆ**

*****************

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ – ಇಸ್ರೋ ತನ್ನ ಸ್ಪೇಡೆಕ್ಸ್ ಮಿಷನ್ ಅಡಿಯಲ್ಲಿ 2 ಉಪಗ್ರಹಗಳ ಜೋಡಣಾ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.

ಇಸ್ರೋದ ಈ ಸಾಧನೆಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಗಣ್ಯರು ಶ್ಲಾಘಿಸಿದ್ದಾರೆ.

ಈ ಐತಿಹಾಸಿಕ ಮೈಲಿಗಲ್ಲಿನೊಂದಿಗೆ, ಭಾರತವು ಬಾಹ್ಯಾಕಾಶ ಡಾಕಿಂಗ್ ಸಾಮರ್ಥ್ಯವನ್ನು ಪ್ರದರ್ಶಿಸಿದ ನಾಲ್ಕನೇ ರಾಷ್ಟ್ರವಾಗಿದೆ. ಈ ಸಾಧನೆಯು ಚಂದ್ರಯಾನ–4, ಭಾರತದ ಯೋಜಿತ ಬಾಹ್ಯಾಕಾಶ ನಿಲ್ದಾಣ ಮತ್ತು ಗಗಯಾನ್ ನಂತಹ ಬಾಹ್ಯಾಕಾಶ ಪರಿಶೋಧನೆಯಲ್ಲಿ ದೇಶದ ಭವಿಷ್ಯದ ಪ್ರಯತ್ನಗಳಿಗೆ ದಾರಿ ಮಾಡಿಕೊಡುತ್ತದೆ ಎಂದು ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.

ಇದೇ ವೇಳೆ, ಉಪಗ್ರಹಗಳ ಸ್ಪೇಸ್ ಡಾಕಿಂಗ್ ಪ್ರದರ್ಶನವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ ಇಸ್ರೋದ ವಿಜ್ಞಾನಿಗಳು ಹಾಗೂ ಬಾಹ್ಯಾಕಾಶ ಸಂಶೋಧನೆಯಲ್ಲಿ ತೊಡಗಿರುವ ಎಲ್ಲರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಈ ಕುರಿತು, ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಅವರು, ಮುಂಬರುವ ವರ್ಷಗಳಲ್ಲಿ ದೇಶದ ಮಹತ್ವಾಕಾಂಕ್ಷಿ ಬಾಹ್ಯಾಕಾಶ ಮಿಷನ್‌ಗಳನ್ನು ಕೈಗೆತ್ತಿಕೊಳ್ಳಲು ಇದೊಂದು ಮಹತ್ವದ ಮೈಲಿಗಲ್ಲಾಗಿದೆ ಎಂದು ತಿಳಿಸಿದ್ದಾರೆ.

*****************

ಭಾರತ ಪ್ರವಾಸದಲ್ಲಿರುವ ಸಿಂಗಾಪುರ ಅಧ್ಯಕ್ಷ ಧರ್ಮನ್ ಷಣ್ಮುಗರತ್ನಂ ಅವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ರಾಷ್ಟ್ರಪತಿ ಭವನದಲ್ಲಿಂದು ಸಾಂಪ್ರದಾಯಿಕ ಸ್ವಾಗತ ಕೋರಿದರು. ಈ ಸಂದರ್ಭದಲ್ಲಿ ಪ್ರಧಾನಿ ನರೇಂದ್ರ ಮೋದಿ ಉಪಸ್ಥಿತರಿದ್ದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಸಿಂಗಾಪುರ ಅಧ್ಯಕ್ಷರು, ಉಭಯ ದೇಶಗಳ ನಡುವೆ ಸ್ಥಿರತೆ ಮತ್ತು ಡಿಜಿಟಲ್ ಬಾಹ್ಯಾಕಾಶ ತಂತ್ರಜ್ಞಾನ ವಲಯದಲ್ಲಿ ಹೊಸ ಉಪಕ್ರಮಗಳನ್ನು ಕಂಡುಕೊಳ್ಳುವ ಬಗ್ಗೆ ಪ್ರಯತ್ನಗಳು ನಡೆದಿವೆ ಎಂದು ಹೇಳಿದರು.

ಗುಜರಾತ್‌ನ ಗಿಫ್ಟ್ ಸಿಟಿ ಹಾಗೂ ಸಿಂಗಾಪುರದಲ್ಲಿರುವ ಹಣಕಾಸು ಸಂಸ್ಥೆಗಳ ನಡುವೆ ಡೇಟಾ ಕಾರಿಡಾರ್ ವ್ಯವಸ್ಥೆ ರೂಪಿಸುವ ಸಾಧ್ಯತೆಗಳ ಕುರಿತು ಅವರು ಪ್ರಸ್ತಾಪಿಸಿದರು. ಉಭಯ ದೇಶಗಳ ನಡುವಿನ ಸಮಗ್ರ ವ್ಯೂಹಾತ್ಮಕ ಪಾಲುದಾರಿಕೆಯನ್ನು ಮತ್ತಷ್ಟು ಚುರುಕುಗೊಳಿಸುವುದು ಹಾಗೂ ಸೆಮಿಕಂಡೆಕ್ಟರ್‌ಗಳು ಹೊಸ ಪೀಳಿಗೆ ಹಾಗೂ ನೆಟ್ ಜಿರೋ ಕೈಗಾರಿಕಾ ಉದ್ಯಾನಗಳ ನಿರ್ಮಾಣ ವಿಚಾರದಲ್ಲೂ ಪರಸ್ಪರ ಸಹಕಾರಕ್ಕೆ ಅಗತ್ಯವಿರುವ ಹೊಸ ಉಪಕ್ರಮಗಳನ್ನು ಜಾರಿಗೊಳಿಸುವುದು ಅತ್ಯಗತ್ಯ ಎಂದರು.

ಉಭಯ ದೇಶಗಳ ನಡುವೆ ವ್ಯಾಪಾರ, ರಕ್ಷಣಾ ಸಹಕಾರ ಮತ್ತು ಕೌಶಲ್ಯಾಭಿವೃದ್ಧಿ ವಿಚಾರಗಳಿಂದ ಉತ್ತಮ ಬಾಂಧವ್ಯ ಮುಂದುವರೆದಿದೆ ಎಂದು ಹೇಳಿದರು.

ಇದೇ ವೇಳೆ, ಸಿಂಗಾಪುರ ಅಧ್ಯಕ್ಷ ಧರ್ಮನ್ ಷಣ್ಮುಗರತ್ನಂ ಅವರೊಂದಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ನಡೆಸಲಿದ್ದಾರೆ. ನಂತರ ಸಿಂಗಾಪುರ ಅಧ್ಯಕ್ಷರು ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಮಹತ್ವದ ಮಾತುಕತೆ ನಡೆಸಲಿದ್ದಾರೆ.

*****************

ಈ ವರ್ಷದ 76ನೇ ಗಣರಾಜ್ಯೋತ್ಸವದಲ್ಲಿ ಇಂಡೋನೇಷ್ಯಾದ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ, ಇಂಡೋನೇಷ್ಯಾದ ಅಧ್ಯಕ್ಷರು ಜನವರಿ 25 ಮತ್ತು 26 ರಂದು ಭಾರತಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ.

ವಿದೇಶಾಂಗ ಸಚಿವಾಲಯದ ಪ್ರಕಾರ, 2024 ರ ಅಕ್ಟೋಬರ್‌ನಲ್ಲಿ ಇಂಡೋನೇಷ್ಯಾದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ನಂತರ ಪ್ರಬೋವೊ ಸುಬಿಯಾಂಟೊ ಅವರ ಮೊದಲ ಭಾರತ ಭೇಟಿ ಇದಾಗಿದೆ.

ಭಾರತ ಮತ್ತು ಇಂಡೋನೇಷ್ಯಾ ಆತ್ಮೀಯ ಮತ್ತು ಸ್ನೇಹಪರ ಸಂಬಂಧಗಳನ್ನು ಹೊಂದಿವೆ. ಇಂಡೋನೇಷ್ಯಾ, ಸಮಗ್ರ ಕಾರ್ಯತಂತ್ರದ ಪಾಲುದಾರ ದೇಶವಾಗಿ, ಭಾರತದ 'ಆಕ್ಟ್ ಈಸ್ಟ್' ನೀತಿ ಮತ್ತು ಇಂಡೋ–ಪೆಸಿಫಿಕ್ ಪ್ರದೇಶದಲ್ಲಿ ಪ್ರಮುಖ ಆಧಾರ ಸ್ತಂಭವಾಗಿದೆ.

ಭಾರತೀಯ ವಾಯುಪಡೆಯು ಗಣರಾಜ್ಯೋತ್ಸವದ ಪರೇಡ್‌ನಲ್ಲಿ ಮೈನವಿರೇಳಿಸುವ ವೈಮಾನಿಕ ಪ್ರದರ್ಶನವನ್ನು ಪ್ರದರ್ಶಿಸಲು ಸಿದ್ಧವಾಗಿದೆ. ಒಟ್ಟು 40 ಯುದ್ಧ ವಿಮಾನಗಳು ಪ್ರದರ್ಶನದಲ್ಲಿ ಭಾಗವಹಿಸಲಿವೆ.

ಮಿಗ್–29, ರಫೇಲ್, ಸುಖೋಯ್–30, ಜಾಗ್ವಾರ್, ಅಪಾಚೆ ಸೇರಿದಂತೆ ಪ್ರಮುಖ ಯುದ್ಧ ವಿಮಾನಗಳು ಪ್ರಮುಖ ಆಕರ್ಷಣೆಯಾಗಲಿವೆ.

ಸ್ಕ್ವಾಡ್ರನ್ ಲೀಡರ್ ಮಹೇಂದ್ರ ಸಿಂಗ್ ನೇತೃತ್ವದ ಒಟ್ಟು 148 ಐಎಎಫ್ ಸಿಬ್ಬಂದಿ ಪರೇಡ್‌ನಲ್ಲಿ ಭಾಗವಹಿಸಲಿದ್ದಾರೆ.

*****************

ಸುಮಾರು ಮೂರು ಸಾವಿರ ರೂಪಾಯಿಗಳ ವೆಚ್ಚದಲ್ಲಿ ಭಾರತೀಯ ನೌಕಾಪಡೆಗೆ ಮಧ್ಯಮ ಶ್ರೇಣಿಯ ವಾಯು ಕ್ಷಿಪಣಿಗಳನ್ನು ಪೂರೈಸುವ ಒಪ್ಪಂದಕ್ಕೆ ರಕ್ಷಣಾ ಸಚಿವಾಲಯವು ಇಂದು ಭಾರತ್ ಡೈನಾಮಿಕ್ಸ್ ಲಿಮಿಟೆಡ್‌ನೊಂದಿಗೆ ಸಹಿ ಹಾಕಿದೆ.

ಮಧ್ಯಮ ಶ್ರೇಣಿಯ ವಾಯು ಕ್ಷಿಪಣಿಗಳ ವ್ಯವಸ್ಥೆಯು, ಭವಿಷ್ಯದಲ್ಲಿ ನೌಕಾಪಡೆಯ ಹಡಗುಗಳಿಗೆ ಅಳವಡಿಸಿಕೊಳ್ಳಲು ಉತ್ತಮವಾಗಿದೆ. ಅಲ್ಲದೇ, ಭಾರತದ ರಕ್ಷಣಾ ಸಾಮರ್ಥ್ಯ ಮತ್ತು ಸ್ವದೇಶಿ ಸುಧಾರಿತ ಮಿಲಿಟರಿ ತಂತ್ರಜ್ಞಾನವನ್ನು ಹೆಚ್ಚಿಸಲು ನಡೆಯುತ್ತಿರುವ ಪ್ರಯತ್ನಗಳಲ್ಲಿ ಈ ಒಪ್ಪಂದವು ನಿರ್ಣಾಯಕ ಮೈಲಿಗಲ್ಲನ್ನು ಸೂಚಿಸುತ್ತದೆ ಎಂದು ರಕ್ಷಣಾ ಸಚಿವಾಲಯವು ತಿಳಿಸಿದೆ.

*****************

ಕೇಂದ್ರ ಸರ್ಕಾರಿ ನೌಕರರು ಮತ್ತು ಪಿಂಚಣಿದಾರರಿಗೆ 8ನೇ ವೇತನ ಆಯೋಗವನ್ನು ಸ್ಥಾಪಿಸುವುದಾಗಿ ಸರ್ಕಾರ ಇಂದು ಘೋಷಿಸಿದೆ.

ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆ ಇಂದು 8ನೇ ವೇತನ ಆಯೋಗವನ್ನು ಸ್ಥಾಪಿಸಲು ಅನುಮೋದನೆ ನೀಡಿದೆ.

ನವದೆಹಲಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, 7ನೇ ವೇತನ ಆಯೋಗದ ಅವಧಿ 2026 ರಲ್ಲಿ ಕೊನೆಗೊಳ್ಳಲಿದ್ದು, ಈಗ 8ನೇ ವೇತನ ಆಯೋಗದ ಸ್ಥಾಪನೆಯು ವೇತನ ಸಮಿತಿಯ ಶಿಫಾರಸುಗಳನ್ನು ಸ್ವೀಕರಿಸಲು ಸಾಕಷ್ಟು ಸಮಯವನ್ನು ನೀಡುತ್ತದೆ ಎಂದು ಹೇಳಿದರು.

ಆಯೋಗದ ಅಧ್ಯಕ್ಷರು ಮತ್ತು ಇಬ್ಬರು ಸದಸ್ಯರ ನೇಮಕವನ್ನು ಶೀಘ್ರದಲ್ಲೇ ಮಾಡಲಾಗುವುದು ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

*****************

ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಸ್ಟಾರ್ಟ್ ಅಪ್ ಇಂಡಿಯಾ ಉಪಕ್ರಮ ಜಾರಿಗೆ ಬಂದು ಇಂದಿಗೆ 9 ವರ್ಷಗಳನ್ನು ಪೂರೈಸಿದೆ.

ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ ನರೇಂದ್ರ ಮೋದಿ, ದೇಶದಲ್ಲಿ ನವೋದ್ಯಮಗಳ ಸಂಸ್ಕೃತಿ ಪ್ರೋತ್ಸಾಹಿಸಲು ಎಲ್ಲ ರೀತಿಯ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ ಎಂದು ಹೇಳಿದ್ದಾರೆ.

ಕಳೆದ 9 ವರ್ಷಗಳಲ್ಲಿ ಅಸಂಖ್ಯಾತ ಯುವಜನತೆ ನವೋದ್ಯಮಗಳ ಸ್ಥಾಪನೆ ವಿಚಾರದಲ್ಲಿ ತಮ್ಮಲ್ಲಿರುವ ನಾವೀನ್ಯತಾ ಆಲೋಚನೆಗಳನ್ನು ಕಾರ್ಯರೂಪಕ್ಕೆ ಯಶಸ್ವಿಯಾಗಿ ತಂದಿದ್ದಾರೆ ಎಂದರು.

ಸುಲಭ ವ್ಯಾಪಾರ ವಹಿವಾಟು ನಡೆಸಲು ಅನಕೂಲವಾಗುವಂತೆ ಸರ್ಕಾರ ಹಲವು ಯೋಜನೆಗಳನ್ನು ಜಾರಿಗೆ ತಂದಿದ್ದು, ಪ್ರತಿಯೊಂದು ಹಂತದಲ್ಲೂ ನವೋದ್ಯಮಗಳಿಗೆ ಅಗತ್ಯ ಸಂಪನ್ಮೂಲ ಮತ್ತು ಬೆಂಬಲ ನೀಡಲಾಗುತ್ತಿದೆ ಎಂದು ಹೇಳಿದ್ದಾರೆ.

*****************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್' ಮೂಲಕ ಈ ತಿಂಗಳ 19ರ ಭಾನುವಾರದಂದು ಬೆಳಗ್ಗೆ 11 ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಚಿಂತನೆಗಳನ್ನು ಹಂಚಿಕೊಳ್ಳಲಿದ್ದಾರೆ.

ಇದು ಮನ್ ಕಿ ಬಾತ್ ಕಾರ್ಯಕ್ರಮದ 118ನೇ ಆವೃತ್ತಿಯಾಗಿದೆ. ಸಾರ್ವಜನಿಕರು ತಮ್ಮ ಸಲಹೆ, ಸೂಚನೆಗಳನ್ನು ಉಚಿತ ದೂರವಾಣಿ 1800-11-7800 ಗೆ ಕರೆ ಮಾಡಿ ತಿಳಿಸಬಹುದಾಗಿದೆ. ಇದಲ್ಲದೇ ಸಾರ್ವಜನಿಕರು ನರೇಂದ್ರ ಮೋದಿ ಆ್ಯಪ್ ಅಥವಾ ಮೈ ಗೌವ್ ಓಪನ್ ಫೋರಂ ಮೂಲಕ ಆನ್‌ಲೈನ್‌ನಲ್ಲಿ ಅಭಿಪ್ರಾಯಗಳನ್ನು ಹಂಚಿಕೊಳ್ಳಬಹುದಾಗಿದೆ.

ಸಾರ್ವಜನಿಕರು ತಮ್ಮ ಸಲಹೆ, ಸೂಚನೆ, ಅಭಿಪ್ರಾಯಗಳನ್ನು ತಿಳಿಸಲು ಈ ತಿಂಗಳ 17 ಕೊನೆಯ ದಿನವಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆ್ಯಪ್‌ನಲ್ಲಿ ಬಿತ್ತರಗೊಳ್ಳಲಿದೆ.

ಅಲ್ಲದೆ ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲೂ ಆಕಾಶವಾಣಿ ಈ ಕಾರ್ಯಕ್ರಮವನ್ನು ಪ್ರಸಾರ ಮಾಡಲಿದೆ.

*****************

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆಯುತ್ತಿರುವ ಮಹಾ ಕುಂಭಮೇಳಕ್ಕೆ ವಿಶ್ವದ ವಿವಿಧ ಭಾಗಗಳಿಂದ ಭಕ್ತರು, ಆಸಕ್ತರು ಆಗಮಿಸುತ್ತಿದ್ದಾರೆ. ತ್ರಿವೇಣಿ ಸಂಗಮದಲ್ಲಿ ಇಂದು ಹತ್ತು ದೇಶಗಳ 21 ಸದಸ್ಯರ ನಿಯೋಗವು ಪುಣ್ಯ ಸ್ನಾನ ಮಾಡಿದೆ.

ವಿದೇಶಾಂಗ ಸಚಿವಾಲಯದ ಆಹ್ವಾನದ ಮೇರೆಗೆ ನಿಯೋಗವು ಪ್ರಯಾಗ್‌ರಾಜ್‌ಗೆ ನಿನ್ನೆ ಆಗಮಿಸಿದೆ. ವಾಸ್ತವ್ಯಕ್ಕಾಗಿ ಅರೆಲ್‌ನಲ್ಲಿರುವ ಟೆಂಟ್ ಸಿಟಿಯಲ್ಲಿ ವ್ಯವಸ್ಥೆ ಮಾಡಲಾಗಿದೆ. ನಿಯೋಗದ ಸದಸ್ಯರು ಇಂದು ಮಹಾ ಕುಂಭಮೇಳ ಪ್ರದೇಶದಲ್ಲಿ ಪ್ರವಾಸ ಕೈಗೊಂಡಿತು. ಪಾರಂಪರಿಕ ನಡಿಗೆಯಲ್ಲಿ ಸದಸ್ಯರು ಪ್ರಯಾಗ್‌ರಾಜ್‌ನ ಸಾಂಸ್ಕೃತಿಕ ಮತ್ತು ಐತಿಹಾಸಿಕ ಪರಂಪರೆಯನ್ನು ಕಣ್ತುಂಬಿಕೊಂಡರು.

ಅಲ್ಲದೇ, ಹೆಲಿಕಾಪ್ಟರ್ ಮೂಲಕ ಮಹಾಕುಂಭ ಪ್ರದೇಶದ ವೈಮಾನಿಕ ನೋಟವನ್ನು ಆನಂದಿಸಿದರು. ಅಂತಾರಾಷ್ಟ್ರೀಯ ನಿಯೋಗದಲ್ಲಿ ಫಿಜಿ, ಫಿನ್‌ಲ್ಯಾಂಡ್, ಗಯಾನ, ಮಲೇಷಿಯಾ, ಮಾರಿಷಸ್, ಸಿಂಗಾಪುರ, ದಕ್ಷಿಣ ಆಫ್ರಿಕಾ, ಶ್ರೀಲಂಕಾ, ಟ್ರಿನಿಡಾಡ್ ಮತ್ತು ಟೊಬಾಗೊ ಹಾಗೂ ಯೂನೈಟೆಡ್ ಅರಬ್ ಎಮಿರೇಟ್ಸ್ -ಯುಎಇ ಪ್ರತಿನಿಧಿಗಳು ಸೇರಿದ್ದಾರೆ.

*****************

ಆಸ್ಟ್ರೇಲಿಯನ್ ಮುಕ್ತ ಟೆನಿಸ್ ಪಂದ್ಯಾವಳಿಯ ಪುರುಷರ ಡಬಲ್ಸ್ ವಿಭಾಗದಲ್ಲಿ ಭಾರತದ ಎನ್.ಶ್ರೀರಾಮ್ ಬಾಲಾಜಿ ಮತ್ತು ಮೆಕ್ಸಿಕೊದ ಮಿಗುಯೆಲ್ ಏಂಜೆಲ್ ರೇಯೆಸ್-ವರೆಲಾ ಜೋಡಿಯು ಎರಡನೇ ಸುತ್ತಿಗೆ ಮುನ್ನಡೆದಿದೆ.

ಇಂದು ನಡೆದ ಮೊದಲ ಸುತ್ತಿನ ಪಂದ್ಯದಲ್ಲಿ ಈ ಜೋಡಿಯು, ಕಜಕಿಸ್ತಾನದ ಅಲೆಕ್ಸಾಂಡರ್ ನೆಡೋವಿಯೆಸೊವ್ ಮತ್ತು ನೆದರ್‌ಲ್ಯಾಂಡ್ಸ್‌ನ ರಾಬಿನ್ ಹಾಸ್ ಅವರನ್ನು 6-4, 6-3 ಸೆಟ್‌ಗಳಿಂದ ಸೋಲಿಸಿತು. ಶ್ರೀರಾಮ್ ಬಾಲಾಜಿ ಪಂದ್ಯಾವಳಿಯಲ್ಲಿ ಉಳಿದಿರುವ ಏಕೈಕ ಭಾರತೀಯ ಆಟಗಾರರಾಗಿದ್ದಾರೆ.

*****************

ಒಡಿಶಾದ ರೂರ್ಕೆಲಾದ ಬಿರ್ಸಾಮುಂಡಾ ಕ್ರೀಡಾಂಗಣದಲ್ಲಿ ಇಂದು ರಾತ್ರಿ ನಡೆಯಲಿರುವ ಹಾಕಿ ಇಂಡಿಯಾ ಲೀಗ್‌ನ ಪಂದ್ಯದಲ್ಲಿ ಎಸ್‌ಜಿ ಪೈಪರ್ಸ್ ತಂಡವು, ವೇದಾಂತ ಕಳಿಂಗ ಲ್ಯಾನ್ಸರ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ 8-15ಕ್ಕೆ ಆರಂಭವಾಗಲಿದೆ.

ಮಹಿಳಾ ಹಾಕಿ ಇಂಡಿಯಾ ಲೀಗ್‌ನಲ್ಲಿ ಇಂದು ಒಡಿಶಾ ವಾರಿಯಾರ್ ತಂಡದ ವಿರುದ್ಧ 2-1 ಗೋಲುಗಳಿಂದ ಸೂರ್ಮಾ ಹಾಕಿ ಕ್ಲಬ್ ತಂಡವು ಗೆಲುವು ದಾಖಲಿಸಿದೆ.

*********ಮುಕ್ತಾಯ********